ಯೋಜನೆಯ ಪುನರುಜ್ಜೀವನ ಕಾಮಗಾರಿ ಕೈಗೆತ್ತಿಕೊಳ್ಳಲಾಗಿರುತ್ತದೆ.

ಈ ಯೋಜನೆಯಿಂದ ಈ ಹಿಂದೆ ನೀರು ಪಡೆಯದೆ ಇದ್ದ ಸುಮಾರು 112–122 ಹೆಕ್ಟೇರ್ ಪ್ರದೇಶದ ಅಚ್ಚುಕಟ್ಟು ರೈತರಿಗೆ ನೀರೊದಗಿಸಬಹುದಾಗಿರುತ್ತದೆ.

ಮರದೂರು ಏತ ನೀರಾವರಿ ಯೋಜನೆ: ಈ ಯೋಜನೆಯ ವಿನ್ಯಾಸದ ಅಚ್ಚುಕಟ್ಟು 101.20 ಹೆಕ್ಟೇರ್ ಆಗಿರುತ್ತದೆ ಈ ಯೋಜನೆಯು 1981–82ರಲ್ಲಿ ಆನುಷ್ಠಾನಗೊಂಡಿದ್ದು, ಯೋಜನೆಗೆ ಎರಡು 20.00 ಹೆಚ್.ಪಿ. ಪಂಪು ಮತ್ತು ಮೋಟಾರುಗಳು ಅಳವಡಿಸಲಾಗಿರುತ್ತದೆ. ಈ ಪಂಪು ಮತ್ತು ಮೋಟಾರುಗಳು ಬಹಳ ಹಳೆಯದಾಗಿರುವುದರಿಂದ ಇವುಗಳ ನೀರೆತ್ತುವ ಸಾಮರ್ಥ್ಯ ಕಾಲಾಂತರದಲ್ಲಿ ಕಡಿಮೆಯಾಗಿರುತ್ತದೆ. ಆದ್ದರಿಂದ ಯಂತ್ರೋಪಕರಣಗಳನ್ನು ಬದಲಾಯಿಸಿ ಮೊದಲಿನ ಏರು ಕೊಳವೆಯನ್ನು ಮುಂದುವರೆಸಿ ನೀರಿಲ್ಲದೆ ಇರುವ ಸೋಮನಹಳ್ಳಿ ದೊಡ್ಡಕೆರೆ ಮತ್ತು ಸೋಮನಕಟ್ಟೆ ಕೆರೆಗಳಿಗೆ ನೀರು ತುಂಬಿಸುವುದರಿಂದ ಹೊಸ ಅಚ್ಚುಕಟ್ಟು ಸೃಷ್ಟಿಸಿ ಹೆಚ್ಚಿನ ನೀರಾವರಿ ಪ್ರದೇಶ ಕಲ್ಪಿಸಲು ಸ್ಥಳೀಯ ಹಾಗೂ ಜನಪ್ರತಿನಿಧಿಗಳು ಒತ್ತಾಯಿಸಿದ್ದ ಮೇರೆಗೆ ಪುನರುಜ್ಜೀವನ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಈ ಯೋಜನೆಯಿಂದ ಹೊಸದಾಗಿ 134.80 ಹೆಕ್ಟೇರ್ ಹೆಚ್ಚಿನ ಅಚ್ಚುಕಟ್ಟು ನೀರನ್ನು ಪಡೆಯದೆ ಇದ್ದ ಅಚ್ಚುಕಟ್ಟುದಾರರಿಗೆ ಸಮರ್ಪಕವಾಗಿ ನೀರೊದಗಿಸಬಹುದಾಗಿರುತ್ತದೆ. ಈ ಯೋಜನೆಯ ಅಚ್ಚುಕಟ್ಟು 236.00 ಹೆಕ್ಟೇರ್.

ಪಾದಚಾರಿ ಮಾರ್ಗ

268 (645) ಶ್ರೀ ಮುನಿರಾಜು ಎಸ್ (ದಾಸರಹಳ್ಳಿ):–(ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕೆ.ಐ.ಎ.ಡಿ.ಬಿ.ಯವರು ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿರುವ ಪಾದಚಾರಿ ಮಾರ್ಗಗಳನ್ನೂ ಸಹ ಹಂಚಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ?

ಆ) ಬಂದಿದ್ದಲ್ಲಿ, ಯಾವ ಯಾವ ಉದ್ದೇಶಕ್ಕಾಗಿ ಹಂಚಿಕೆ ಮಾಡಲಾಗಿದೆ ಹಾಗೂ ಯಾರು ಯಾರಿಗೆ ಹಂಚಿಕೆ ಮಾಡಲಾಗಿದೆ?

ಇ) ಈ ರೀತಿ ಕಾನೂನು ಬಾಹಿರವಾಗಿ ಹಂಚಿಕೆ ಮಾಡಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಮುರುಗೇಶ್ ಆರ್. ನಿರಾಣಿ (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :–

ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಬೆಂಗಳೂರು ಉತ್ತರ ತಾಲ್ಲೂಕು, ಪೀಣ್ಯ ಕೈಗಾರಿಕಾ ಪ್ರದೇಶವನ್ನು ನಿರ್ಮಿಸಿ, ಕೈಗಾರಿಕಾ ಘಟಕಗಳಿಗೆ ಜಮೀನುಗಳನ್ನು ಹಂಚಿಕೆ ಮಾಡಿರುತ್ತದೆ. ಈ ಕೈಗಾರಿಕಾ ಪ್ರದೇಶದಲ್ಲಿರುವ ಪಾದಚಾರಿ ಮಾರ್ಗಗಳನ್ನು ಯಾವುದೇ ಕೈಗಾರಿಕಾ ಘಟಕಗಳಿಗೆ ಹಂಚಿಕೆ ಮಾಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ತುಂಗಭದ್ರ ಅಚ್ಚುಕಟ್ಟು ಪ್ರದೇಶ

270 (654) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು):–(ಮಾನ್ಯ ಜಲಸಂಪನ್ಮೂಲ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕಳೆದ ಎರಡು ವರ್ಷಗಳಲ್ಲಿ ತುಂಗಭದ್ರ ಅಚ್ಚುಕಟ್ಟು ಪ್ರದೇಶದ ಕಾಡಾಕ್ಕೆ ಇಂಜಿನೀಯರಿಂಗ್, ಕೃಷಿ, ಎಡದಂಡೆ ನಾಲೆ ಹಾಗೂ ಬಲದಂಡೆ ನಾಲೆಗಳಿಗೆ ಮಂಜೂರಾದ ಅನುದಾನವೆಷ್ಟು; (ವರ್ಷಾವಾರು ವಿವರಗಳನ್ನು ನೀಡುವುದು)

ಆ) ಈ ಅನುದಾನದಲ್ಲಿ ವಿವಿಧ ಕಾಮಗಾರಿಗಳಿಗೆ ಹಾಗೂ ಕೃಷಿ ಚಟುವಟಿಕೆಗೆ ಬಿಡುಗಡೆ ಮಾಡಿದ ಮೊತ್ತವೆಷ್ಟು;

ಇ) ಬಿಡುಗಡೆಯಾದ ಮೊತ್ತದಲ್ಲಿ ಸಿಂಧನೂರು ತಾಲ್ಲೂಕಿಗೆ ಬಿಡುಗಡೆ ಮಾಡಿದ ಮೊತ್ತವೆಷ್ಟು;

ಈ) ಈ ಮೊತ್ತವನ್ನು ಬಿಡುಗಡೆ ಮಾಡುವಲ್ಲಿ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;

ಉ) ಬಂದಿದ್ದಲ್ಲಿ, ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?